# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಆರ್.ಜಿ.ನಾಯಕ್, ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ.ಕೋಶ, ಜಿಲ್ಲಾ ಪಂಚಾಯತ್, ಹಾವೇರಿ ಇವರವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

ಓದಲಾಗಿದೆ:- 1. ಅಪರ ನಿಬಂಧಕರು , ವಿಚಾರಣೆ-9, ಮಾನ್ಯ ಲೋಕಾಯುಕ್ತರ ಕಛೇರಿ ಇವರ ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/2400/2012/ ಎಆರ್‌ಇ-9, ದಿನಾಂಕ:24.02.2014

****

**ಪ್ರಸ್ತಾವನೆ:**

ಹಾವೇರಿ ಜಿಲ್ಲೆಯ ರಾಣಿಬೆನ್ನೂರು ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಗುಡ್ಡಗುಡ್ಡಾಪುರ ಗ್ರಾಮದಲ್ಲಿ ನಿರ್ಮಿಸುತ್ತಿದ್ದ ಹಾತ್ ಮಾರಾಟ ಮಳಿಗೆ ಕಾಮಗಾರಿಯ ಪ್ರಥಮ ಬಿಲ್ಲಿನ ಮೊತ್ತ ರೂ.6,24,000/-ಗಳನ್ನು ಬಿಡುಗಡೆಮಾಡುವಂತೆ ಕೋರಿ ಸಿವಿಲ್ ಗುತ್ತಿಗೆದಾರರಾದ ಶ್ರೀ ಶ್ರೀನಿವಾಸ ಹನುಮರೆಡ್ಡಿ ಮೈದೂರ ಇವರು ಸಲ್ಲಿಸಿದ್ದು, ಈ ಮೊತ್ತವನ್ನು ಬಿಡುಗಡೆಮಾಡಲು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಣಿಬೆನ್ನೂರು ಇವರಿಗೆ ಶಿಫಾರಸ್ಸುಮಾಡಲು ಬಿಲ್ ಮೊತ್ತದ ಶೇ.3ರಷ್ಟು ಅಂದರೆ ರೂ.15,000/-ಗಳನ್ನು ಲಂಚವನ್ನಾಗಿ ನೀಡುವಂತೆ ಶ್ರೀ ರಮಾನಾಥ ಗೋವಿಂದರಾಜ ನಾಯಕ್, ಹಿಂದಿನ ಯೋಜನಾ ನಿರ್ದೇಶಕರು,(ಡಿ.ಆರ್.ಡಿ.ಎ.ಕೋಶ), ಜಿಲ್ಲಾ ಪಂಚಾಯತ್, ಹಾವೇರಿ,(ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಬೆಳಗಾವಿ) ಇವರು ಒತ್ತಾಯಿಸಿದ್ದು, ಈ ಬಗ್ಗೆ ದೂರುದಾರರು ಲಿಖಿತ ದೂರನ್ನು ದಿನಾಂಕ:30.11.2011ರಂದು ಪೋಲೀಸ್ ಇನ್ಸ್‌ಪೆಕ್ಟರ್ ಲೋಕಾಯುಕ್ತ ಕಚೇರಿ ಹಾವೇರಿ ಲೋಕಾಯುಕ್ತ ಪೋಲೀಸ್ ಠಾಣೆ ಇಲ್ಲಿಗೆ ನೀಡಿದ್ದು, ಅಂತೆಯೇ ಮೊಕದ್ದಮೆ ದಾಖಲಿಸಿಕೊಂಡಿದ್ದು, ಆರೋಪಿತ ಅಧಿಕಾರಿಯು ದಿನಾಂಕ:30.11.2011 ರಂದು ಲಂಚದ ಹಣ ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಪೋಲೀಸರ ಬಲೆಗೆ ಸಿಕ್ಕಿಬಿದ್ದಿದ್ದು ಆರೋಪಿತ ಅಧಿಕಾರಿಯು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದು ಈ ರೀತಿಯ ಕೃತ್ಯವು ಸರ್ಕಾರಿ ನೌಕರರಿಗೆ ಸಲ್ಲದ ವರ್ತನೆಯಾಗಿದ್ದು, ಕರ್ನಾಟಕ ನಾಗರೀಕ ಸೇವೆಗಳು (ನಡೆತೆ) ನಿಯಮಾವಳಿಗಳು-1966ರ ನಿಯಮ-3(i) ರನ್ನು ಉಲ್ಲಂಘಿಸಿರುವುದರಿಂದ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಹಾಗೂ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವೆಗಳು-(ವರ್ಗೀಕರಣ, ನಿಯಂತ್ರಣ,ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-14(ಎ)ರ ಪ್ರಕಾರ ತಮಗೆ ವಹಿಸಿಕೊಡುವಂತೆ ಮಾನ್ಯ ಲೋಕಾಯುಕ್ತರು ಕರ್ನಾಟಕ ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ-1984ರ ಸೆಕ್ಷನ್-12(3)ರ ಪ್ರಕಾರ ಶಿಫಾರಸ್ಸುಮಾಡಿರುವುದಾಗಿ ತಿಳಿಸುತ್ತಾ, ಅಂತೆಯೇ ಮುಂದಿನ ಕ್ರಮವನ್ನು ಕೈಗೊಳ್ಳುವಂತೆ ಮೇಲೆ ಓದಲಾದ ಪತ್ರದಲ್ಲಿ ಅಪರ ನಿಬಂಧಕರು, ವಿಚಾರಣೆ-9, ಮಾನ್ಯ ಲೋಕಾಯುಕ್ತರ ಕಛೇರಿ, ಕರ್ನಾಟಕ ಇವರು ಸರ್ಕಾರವನ್ನು ಕೋರಿರುತ್ತಾರೆ.

- ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ರಮಾನಾಥ ಗೋವಿಂದರಾಜ ನಾಯಕ್, ರವರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಟಿ 2014 ಬೆಂಗಳೂರು ದಿನಾಂಕ:18-03-2014</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ರಮಾನಾಥ ಗೋವಿಂದರಾಜ ನಾಯಕ್, ಹಿಂದಿನ ಯೋಜನಾ ನಿರ್ದೇಶಕರು, (ಡಿ.ಆರ್.ಡಿ.ಎ.ಕೋಶ), ಜಿಲ್ಲಾ ಪಂಚಾಯತ್, ಹಾವೇರಿ,(ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಬೆಳಗಾವಿ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವೆಗಳು-(ವರ್ಗೀಕರಣ, ನಿಯಂತ್ರಣ,ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-11ರ ಅನುಸಾರ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವೆಗಳು-(ವರ್ಗೀಕರಣ, ನಿಯಂತ್ರಣ,ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-14(ಎ)ರ ಪ್ರಕಾರ ಮಾನ್ಯ ಲೋಕಾಯುಕ್ತ ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಇವರಿಗೆ,</u>

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು
3) ಜಿಲ್ಲಾಧಿಕಾರಿ, ಹಾವೇರಿ/ಬೆಳಗಾವಿ.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ/ಬೆಳಗಾವಿ
5) ಅಪರ ನಿಬಂಧಕರು, ವಿಚಾರಣೆ-9,ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
6) ಸಂಬಂಧಿಸಿದ ಅಧಿಕಾರಿಗೆ.

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.